<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 769/2015 ಸಿಡಬ್ಲೂ : 11 ಪಿಡಬ್ಲೂಃ 9

ಪ್ರಮಾಣವಚನ ಬೋಧಿಸಲಾಯಿತು ದಿಃ13-03-2026

ಹೆಸರು : ಬಾಪುಗೌಡ

ತಂದೆ ಹೆಸರು : ಸಿದ್ದನಗೌಡ ಪಾಟೀಲ್

ವಯಸ್ಸು : 41 ವರ್ಷ

ಉದ್ಯೋಗ : ಪಿ ಐ ಲೋಕಾಯುಕ್ತ ಆದೇಶದಲ್ಲಿರುವವರು

ವಾಸಸ್ಥಳ : ಬೀದರ್

**: ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :**

ನಾನು 01-10-2014 ರಿಂದ 08-06-2016 ವರೆಗೂ ಸೇಡಂ ಪಿ ಎಸ್ ನಲ್ಲಿ ಪಿ ಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ. ದಿಃ21-09-2015 ರಂದು ಚಾ ಸಾ 10 ರವರಿಂದ ಸದರಿ ಪ್ರಕರಣದ ಕಡತವನ್ನು ಪಡೆದುಕೊಂಡು, ಚಾ ಸಾ 12 ರವರ ಮೌಖಿಕ ಆದೇಶದ ಮೇರೆಗೆ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮ ಮೃತ ಅಭಿಲಾಶ್ ರವರ ಶವ ಪಂಚನಾಮೆಯನ್ನು ಸಮಯ ಬೆಳಿಗ್ಗೆ 07-00 ರಿಂದ 08-00 ಗಂಟೆಯ ವರೆಗೆ ಜರುರಿಸಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 2 ಎಂದು ಗುರುತಿಸಲಾಗಿದೆ ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 2(ಸಿ ಮತ್ತು ಡಿ) ಎಂದು ಗುರುತಿಸಲಾಯಿತು. ಅದೇ ರೀತಿ ಶವ ಪಂಚನಾಮೆಯ ಕಾಲಕ್ಕೆ ತೆಗೆದಿರುವ ಭಾವ ಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿ ಪಿ 6 ಎಂದು ಗುರುತಿಸಲಾಯಿತು. ನಂತರ ಸದರಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ ಸಾ 12 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ಶ್ರಿ ಎ ಎಂ ವಕೀಲರಿಂದ:

ದಿಃ21-09-2015 ರಂದು ಚಾ ಸಾ 10 ರವರಿಂದ ಸದರಿ ಪ್ರಕರಣದ ಕಡತವನ್ನು ಪಡೆದುಕೊಂಡು, ಚಾ ಸಾ 12 ರವರ ಮೌಖಿಕ ಆದೇಶದ ಮೇರೆಗೆ ಪಂಚರಾದ ಚಾಸಾ 2 ಮತ್ತು 3 ರವರ ಸಮಕ್ಷಮ ಮೃತ ಅಭಿಲಾಶ್ ರವರ ಶವ ಪಂಚನಾಮೆಯನ್ನು ಸಮಯ ಬೆಳಿಗ್ಗೆ 07-00 ರಿಂದ 08-00 ಗಂಟೆಯ ವರೆಗೆ ಜರುರಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**